RNU AIR DHARWAD

# AKASHAVANI, DHARWAD
# PRADESH SAMACHAR (KANNADA) 12.00 PM

## FEBRUARY 6, 2025

<><><>

ಬೆಂಗಳೂರಿನ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾದೆಮಿ, 2023–24 ನೇ ಸಾಲಿನ ಪ್ರಶಸ್ತಿಗಳನ್ನು, ಘೋಷಿಸಿದೆ. 'ಸಂತ ಸೇವಾಲಾಲ ಪ್ರಶಸ್ತಿ'ಗೆ, ಲೇಖಕಿ ಬಿ.ಟಿ.ಲಲಿತಾ ನಾಯಕ್ ಆಯ್ಕೆಯಾಗಿದ್ದಾರೆ ಎಂದು, ಅಕಾದೆಮಿ ಅಧ್ಯಕ್ಷ ಎ.ಆರ್. ಗೋವಿಂದಸ್ವಾಮಿ ತಿಳಿಸಿದ್ದಾರೆ. ಪ್ರಶಸ್ತಿ 1 ಲಕ್ಷ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ. ಧಾರವಾಡದ ಬಂಜಾರ ನೃತ್ಯಪಟು ಸುಮಂಗಲವ್ವ ಲಂಬಾಣಿ ಸೇರಿದಂತೆ, ನಾಡಿನ ಒಟ್ಟು 20 ಜನ ಸಾಧಕರಿಗೆ ಪ್ರಶಸ್ತಿ ಪ್ರಕಟಿಸಲಾಗಿದೆ.

<><><>

ಜಾನಪದ ವಿದ್ವಾಂಸ ಚಕ್ಕೆರೆ ಶಿವಶಂಕರ ಸೇರಿದಂತೆ, 19 ಜನ ಸಾಧಕರು ಕರ್ನಾಟಕ ಜಾನಪದ ಪರಿಷತ್ತಿನ, ವಾರ್ಷಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ. ರಾಮನಗರದ ಜಾನಪದ ಲೋಕದಲ್ಲಿ, ಪರಿಷತ್ತಿನ ಅಧ್ಯಕ್ಷ ಹಿ.ಚಿ. ಬೋರಲಿಂಗಯ್ಯ, ಪ್ರಶಸ್ತಿ ಪುರಸ್ಕೃತರ ಹೆಸರು ಪ್ರಕಟಿಸಿ, 8 ಮತ್ತು 9 ರಂದು, ಜಾನಪದ ಲೋಕದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ತಿಳಿಸಿದ್ದಾರೆ.

<><><>

ಗ್ರಾಹಕರ ದೂರುಗಳನ್ನು ಪರಿಹರಿಸಲು, ಬೆಳಗಾವಿಯಲ್ಲಿ 'ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ, ಖಾಯಂ ಸಂಚಾರಿ ಪೀಠ' ಪ್ರಾರಂಭವಾಗಿದ್ದು, ಈ ಭಾಗದ ಜನರಿಗೆ ಅನುಕೂಲವಾಗಲಿದೆ ಎಂದು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ. ಬೆಳಗಾವಿಯ ಆಟೋ ನಗರದಲ್ಲಿ, ಖಾಯಂ ಸಂಚಾರಿ ಪೀಠವನ್ನು ಉದ್ಘಾಟಿಸಿ, ಅವರು ಮಾತನಾಡಿದರು. ಕಾನೂನು ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಬೆಳಗಾವಿ ಜಿಲ್ಲೆಯಲ್ಲಿ 2 ಸಾವಿರಕ್ಕೂ ಅಧಿಕ ಗ್ರಾಹಕರ ವ್ಯಾಜ್ಯಗಳ ವಿಚಾರಣೆ ಬಾಕಿ ಇದೆ ಎಂದರು. (06)

<><><>

ಸಣ್ಣ ಹಣಕಾಸು ಸಂಸ್ಥೆಗಳ ಕಾನೂನು ಬಾಹಿರ ದಬ್ಬಾಳಿಕೆ ವಿರುದ್ಧ, ಭಾರತೀಯ ರಿಸರ್ವ್ ಬ್ಯಾಂಕ್ ಸಹಾಯವಾಣಿ ಸಂಖ್ಯೆ 1–4–4–4–8ಕ್ಕೆ ಮಾಹಿತಿ ನೀಡಬಹುದು ಎಂದು, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ತಿಳಿಸಿದ್ದಾರೆ. ನೊಂದ ವ್ಯಕ್ತಿಗಳು ರಾಜ್ಯದ ಏಕೀಕೃತ ಸಹಾಯವಾಣಿ ಸಂಖ್ಯೆ 1–1–2 ಅಥವಾ 1–9–0–2 ನ್ನು ಸಂಪರ್ಕಿಸಬಹುದು ಎಂದು ಮಾಹಿತಿ ನೀಡಿದ್ದಾರೆ.

<><><>

'ಕ್ಷಯ ಮುಕ್ತ ಭಾರತ', ಕೇಂದ್ರ ಪುರಸ್ಕೃತ ಯೋಜನೆಯಡಿ, 100 ದಿನಗಳ, 'ನಿ–ಕ್ಷಯ್' ಕ್ಷಯರೋಗ ತಪಾಸಣಾ ಅಭಿಯಾನದಲ್ಲಿ, ದಾವಣಗೆರೆ ಜಿಲ್ಲೆಯಾದ್ಯಂತ 21 ಹೊಸ ಪ್ರಕರಣಗಳು ಪತ್ತೆಯಾಗಿವೆ ಎಂದು, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾಕ್ಟರ್ ಮುರುಳೀಧರ ತಿಳಿಸಿದ್ದಾರೆ. (06)

<><><>

ಡಾ. ಮುರಳೀಧರ ಧ್ವನಿ 29 ಸೆಕೆಂದುಗಳು

<><><>

ಕಲ್ಯಾಣ ಕರ್ನಾಟಕ ಭಾಗದ, ರಾಯಚೂರಿಗೆ ಏಮ್ಸ್ ಸಂಸ್ಥೆ ಮಂಜೂರು ಮಾಡಬೇಕು ಎಂದು ಮನವಿ ಸಲ್ಲಿಸಿ, ಬಳಿಕ ಕೈಗೊಂಡಿರುವ ಹೋರಾಟ, ಸಾವಿರ ದಿನಗಳನ್ನು ಪೂರೈಸಿದ್ದರೂ, ಕೇಂದ್ರ ಸರ್ಕಾರ ಪೂರಕವಾಗಿ ಸ್ಪಂದಿಸುತ್ತಿಲ್ಲ ಎಂದು, ಸಚಿವ ಎನ್.ಎಸ್. ಬೋಸರಾಜು ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಾದೇಶಿಕ ಅಸಮತೋಲನ ನಿವಾರಣೆ, ಮತ್ತು ಗುಣಮಟ್ಟದ ಆರೋಗ್ಯ ಸೇವೆಗಳನ್ನು, ಆ ಭಾಗದ ಜನರಿಗೂ ಒದಗಿಸುವ ಬದ್ಧತೆ, ಕೇಂದ್ರ ತೋರ್ಪಡಿಸಬೇಕು ಎಂದು ಒತ್ತಾಯಿಸಿದರು. (06)

<><><>

ವಿಜಯನಗರ ಜಿಲ್ಲೆ, ಕೊಟ್ಟೂರು ತಾಲೂಕಿನ ನಿಂಬಳಗೆರೆ ಗ್ರಾಮದ ಕಾಯ್ದಿಟ್ಟ ಅರಣ್ಯ ಹಾಗೂ ಬಳ್ಳಾರಿ ಜಿಲ್ಲೆ, ಕಂಪ್ಲಿ ತಾಲೂಕು ಚಿನ್ನಾಪುರ ಗ್ರಾಮದ ಕರಿಗುಡ್ಡ ಪ್ರದೇಶದಲ್ಲಿ ಕಾಣಿಸಿಕೊಂಡಿದ್ದ, ಕಾಡ್ಗಿಚ್ಚು ನಂದಿಸುವಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಯಶಸ್ವಿಯಾಗಿದ್ದಾರೆ.

<><><>

ಹೊಸ ದಿಲ್ಲಿಯ ಗಣ್ಯರಾಜ್ಯೋತ್ಸವ ಪಥಸಂಚಲನದಲ್ಲಿ, ರಾಜ್ಯದ ಎನ್.ಸಿ.ಸಿ. ಕೆಡೆಟ್‌ಗಳು ಉತ್ತಮ ಪ್ರದರ್ಶನ ನೀಡಿದ್ದು ಅಭಿನಂದನಾರ್ಹ. ಕೆಡೆಟ್‌ಗಳ ಪರಿಶ್ರಮದಿಂದ ಪಥ ಸಂಚಲನ ಅತ್ಯುತ್ತಮವಾಗಿ ಮೂಡಿ ಬಂದಿತು ಎಂದು, ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಶ್ಲಾಘಿಸಿದ್ದಾರೆ. ಕರ್ನಾಟಕ – ಗೋವಾ ನ್ಯಾಷನಲ್ ಕೆಡೆಟ್ ಕಾರ್ಪ್ಸ್ ಹಾಗೂ ಅಧಿಕಾರಿಗಳಿಗೆ ರಾಜಭವನದಲ್ಲಿ ಆಯೋಜಿಸಿದ್ದ, ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು. ಎನ್.ಸಿ.ಸಿ., ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ, ರಾಷ್ಟ್ರಾಭಿಮಾನ ಹಾಗೂ ಸೇವಾ ಮನೋಭಾವವನ್ನು ಹುಟ್ಟುಹಾಕುತ್ತದೆ, ಎಂದರು.

<><><>

ಧಾರವಾಡ ಜಿಲ್ಲೆಯ ಶೈಕ್ಷಣಿಕ ಸುಧಾರಣೆಗಾಗಿ, 'ಮಿಶನ್ ವಿದ್ಯಾಕಾಶಿ' ಯೋಜನೆಯಡಿ, ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕರಿಗೆ ವಿಶೇ ' ತರಬೇತಿ ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ದಿವ್ಯಾ ಪ್ರಭು ತಿಳಿಸಿದ್ದಾರೆ. ಕೆ.ಇ.ಬೋರ್ಡ್ಸ್ ನಲ್ಲಿ, 'ನಮ್ಮ ಗುರಿ ನೂರರತ್ತ–ಪ್ರೇರಣಾ ಕಾರ್ಯಾಗಾರ' ಉದ್ಘಾಟಿಸಿ, ಅವರು ಮಾತನಾಡಿದರು. ಧಾರವಾಡ ಜಿಲ್ಲೆಯಿಂದ 29 ಸಾವಿರ ಮಕ್ಕಳು, ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ತಮ್ಮ ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಹೇಳಿದರು.

<><><>

ಸದ್ಗುರು ಶ್ರೀ ಸಿದ್ಧಾರೂಢ ಕಥಾಂಮೃತ ಗ್ರಂಥದ, ಶತಮಾನೋತ್ಸವ ಹಿನ್ನೆಲೆ, ರಾಜ್ಯಾದ್ಯಂತ ಸಂಚರಿಸುತ್ತಿರುವ, ಜಗದ್ಗುರು ಶ್ರೀ ಸಿದ್ಧಾರೂಢ ಜ್ಯೋತಿ ರಥ, ಗದಗ ನಗರದ ತೋಂಟದಾರ್ಯ ಮಠವನ್ನು, ತಲುಪಿದೆ.

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ರಥವನ್ನು ಸ್ವಾಗತಿಸಿ, ಬದುಕು ಸದ್ಭಾವದಿಂದ ಕೂಡಿರಬೇಕು ಎಂಬ, ಜಾಗೃತಿ ಮೂಡಿಸಲು, ಶ್ರೀ ಸಿದ್ಧಾರೂಢರ ಜ್ಯೋತಿ ನಾಡಿನಾದ್ಯಂತ ಸಂಚರಿಸುತ್ತಿದೆ ಎಂದರು. (10)

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>